ಹಾಗೂ ಮಂಡಳಿಯ ಇತರೆ ಯೋಜನೆಗಳಲ್ಲಿ ಒಟ್ಟು 27 ಬಡಾವಣೆಯನ್ನು ನಿರ್ಮಿಸಲು ತೀರ್ಮಾನಿಸಲಾಗಿರುತ್ತದೆ

ಇ) ಕರ್ನಾಟಕ ಗೃಹ ಮಂಡಳಿ ವತಿಯಿಂದ ಬೆಂಗಳೂರು ನಗರದಲ್ಲಿ ಪ್ರಸ್ತುತ ಎರಡು ಹೊಸ ಬಡಾವಣೆಗಳನ್ನು ನಿರ್ಮಿಸಲಾಗುತ್ತಿದೆ

ಈ) ಬೆಂಗಳೂರು ನಗರದಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ಪ್ರಸ್ತುತ ಸೂರ್ಯನಗರ, ಇಗ್ಗಲೂರು, ಬನಹಳ್ಳಿ, ಚಂದಾಪುರ, ಹೊಸೂರು ರಸ್ತೆ, ಬೆಂಗಳೂರು ಮತ್ತು ಕೆಂಗೇರಿ, ಬಂಡೇಮರ ಮೈಸೂರು ರಸ್ತೆ, ಇಲ್ಲಿ ವಸತಿ ಯೋಜನೆಯನ್ನು ಹಮ್ಮಿಕೊಂಡಿರುತ್ತದೆ

ಉ) ಗ್ರಾಮೀಣ ಆಶ್ರಯ ಯೋಜನೆಯಡಿ 2005–06ನೇ ಸಾಲಿಗೆ 226080 ಮನೆಗಳ ಗುರಿ ನೀಡಿದ್ದು ಡಿಸೆಂಬರ್ ಅಂತ್ಯದ ವೇಳೆಗೆ 19242 ಮನೆಗಳನ್ನು ನಿರ್ಮಿಸಲಾಗಿದ್ದು ಉಳಿದ ಮನೆಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ

2005–06ನೇ ಸಾಲಿನ ಮನೆಗಳನ್ನು ನಿರ್ಮಿಸಲು ಆಯವ್ಯಯದಲ್ಲಿ ಒಟ್ಟು ರೂ 242 88 ಕೋಟಿಗಳನ್ನು ಒದಗಿಸಲಾಗಿದ್ದು, ಇದುವರೆಗೂ ರೂ 167 80 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ

ಊ) ನಗರ ಆಶ್ರಯ ಯೋಜನೆಯಡಿಯಲ್ಲಿ 2005–06ನೇ ಸಾಲಿಗೆ 50000 ಮನೆಗಳ ಗುರಿಯನ್ನು ಸರ್ಕಾರ ನಿಗದಿಪಡಿಸಿದ್ದು, ಈ ಗುರಿಗೆ ತಕ್ಕಂತೆ ಫಲಾನುಭವಿಗಳ ಆಯ್ಕೆ ಪ್ರಗತಿಯಲ್ಲಿರುತ್ತದೆ

1048 (1091) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಕನ್ನಡ ಮಾಧ್ಯಮ ಶಾಲೆಗಳಿಗೆ ಅನುಮತಿ ಪಡೆದು ಆಂಗ್ಲ ಮಾಧ್ಯಮ ಶಾಲೆಗಳನ್ನು ನಡೆಸುತ್ತಿರುವ ಇಂಗ್ಲೀಷ್ ಮಾಧ್ಯಮದ ಶಾಲೆಗಳ ಸಂಖ್ಯೆ ಎಷ್ಟು,

ಆ) ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿ ಕನ್ನಡ ಮಾಧ್ಯಮದಲ್ಲಿ ಅನುಮತಿ ಪಡೆದು, 7211 ಶಾಲೆಗಳು ನಡೆಯುತ್ತಿದ್ದು, ಇವುಗಳಲ್ಲಿ 2698 ಶಾಲೆಗಳು ಆಂಗ್ಲ ಮಾಧ್ಯಮದಲ್ಲಿ ನಡೆಸುತ್ತಿವೆ

ಆ) ಇಂತಹ 2215 ಶಾಲೆಗಳ ಮಾನ್ಯತೆ ಹಿಂದಕ್ಕೆ ಪಡೆಯಲಾಗಿದೆ

ಮುಂದಿನ ಶೈಕ್ಷಣಿಕ ವರ್ಷದಲ್ಲಿ ಇಂತಹ ಶಾಲೆಗಳಿಗೆ ಮಕ್ಕಳನ್ನು ದಾಖಲು ಮಾಡದಿರಲು ಪತ್ರಿಕಾ ಪ್ರಕಟಣೆ ನೀಡಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಬಂಧಿಸಿದ ಉಪನಿರ್ದೇಶಕರುಗಳಿಗೆ ತಿಳಿಸಲಾಗಿದೆ

1049 (1093) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ರಾಜ್ಯಾದ್ಯಂತ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಕರುಗಳನ್ನು ಅವರು ಕೋರಿರುವ ಸ್ಥಳಕ್ಕೆ ವರ್ಗಾಯಿಸಲು ಸರ್ಕಾರದ ಆದೇಶ ಹೊರಡಿಸಿದ್ದರೂ ಸಹ ಇದುವರೆಗೂ ಕಾರ್ಯಗತವಾಗದಿರಲು ಕಾರಣಗಳೇನು,

ಆ) ಇದನ್ನು ಯಾವಾಗ ಕಾರ್ಯಗತ ಮಾಡಲಾಗುವುದು,

ಇ) ಇದುವರೆಗೂ ಎಷ್ಟು ಜನ ಶಿಕ್ಷಕರನ್ನು ಅವರು ಕೋರಿರುವ ಸ್ಥಳಕ್ಕೆ ವರ್ಗಾಯಿಸಲಾಗಿದೆ,

ಈ) ಈ ವರ್ಗಾವಣೆ ಪ್ರಕ್ರಿಯೆ ಯಾವ ಹಂತದಲ್ಲಿದೆ?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) 2006–07ನೇ ಸಾಲಿನಲ್ಲಿ ವರ್ಗಾವಣೆ ಅವಧಿ ದಿನಾಂಕ 31 05 2006ಕ್ಕೆ ಮುಗಿದಿದೆ ಸದರಿ ದಿನಾಂಕದ ನಂತರ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ಬಂದಿರುವ ವರ್ಗಾವಣೆ ಆದೇಶಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಜಾರಿಗೊಳಿಸಿಲ್ಲ

ಶೈಕ್ಷಣಿಕ ವರ್ಷದ ಮಧ್ಯದಲ್ಲಿ ವರ್ಗಾವಣೆ ಮಾಡಿದಲ್ಲಿ ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತದೆ ಈ ಕಾರಣಗಳಿಂದ 31 05 2006ರ ನಂತರ ಇಂತಹ ವರ್ಗಾವಣೆಗಳನ್ನು ಜಾರಿಗೊಳಿಸಿಲ್ಲ